## ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:-* 2002-03 ರಿಂದ 2004-05 ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಕೊಳವೆ ಬಾವಿ ಕೊರೆಯುವುದರಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರ -ಶ್ರೀ ಅಮೃತಕುಮಾರ್ ಸಾಲಂಕಿ, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು. ಮತ್ತು ಇತರರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ – ಮಂಡನಾಧಿಕಾರಿಗಳನ್ನು ಬದಲಿಸುವ ಬಗ್ಗೆ -ಆದೇಶ.

*ಓದಲಾಗಿದೆ:*

| | |
|---|---|
| 1. | ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 05 ಇಎನ್‌ಕ್ಯೂ 2006,ದಿನಾಂಕ:07.6.2016. |
| 2. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಪತ್ರ ಸಂಖ್ಯೆ:ಜಿಪರಾ/ಸಿ-1/ಸಿ.ಸಿ.ಎ/244/ಕೊ.ಬಾ.ಅ/05-06/2016-17/2689, ದಿ:25.10.16 |

***ಪ್ರಸ್ತಾವನೆ:-***

2002-03 ರಿಂದ 2004-05 ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಕೊಳವೆ ಬಾವಿ ಕೊರೆಯುವುದಕ್ಕೆ ಸಂಬಂಧಿಸಿದಂತೆ ಕೊಳವೆ ಬಾವಿಯನ್ನು ಕೊರೆಯಿಸಿದ ಕಾಮಗಾರಿಯನ್ನು ಆದೇಶ ನೀಡುವುದಕ್ಕಿಂತ ಮೊದಲೇ ಪೂರ್ಣಗೊಳಿಸಿದಂತೆ ಅಳತೆ ಪುಸ್ತಕದಲ್ಲಿ ಅಳತೆಗಳನ್ನು ದಾಖಲು ಮಾಡಿರುವುದು, ಕೊಳವೆ ಬಾವಿಯ ಪ್ರತಿ ದಿನದ ಪ್ರಗತಿ ವರದಿಗೂ ಕಾಮಗಾರಿಗಳಿಗಾಗಿ ನೀಡಿದ ಆದೇಶದ ದಿನಾಂಕಕ್ಕೂ ಮತ್ತು ಕೊಳವೆ ಬಾವಿಗಳನ್ನು ಕೊರೆಯಿಸಿದ ಬಿಲ್ಲುಗಳನ್ನು ಪಾವತಿಗಾಗಿ ಸಲ್ಲಿಸಿದ ದಿನಾಂಕಕ್ಕೂ ಒಂದಕ್ಕೊಂದು ತಾಳೆಯಾಗದಿರುವುದು, ಬಿಲ್‌ನ್ನು ತಿದ್ದುಪಡಿ ಮಾಡಿರುವುದು, ಗುತ್ತಿಗೆದಾರರೊಂದಿಗೆ ಶಾಮೀಲಾಗಿ ಬಿಲ್ಲುಗಳ ಪಾವತಿಸುವ ಮೂಲಕ ಹಣ ದುರುಪಯೋಗವಾಗಲು ಕಾರಣರಾಗಿರುತ್ತಾರೆ ಎಂಬ ಆರೋಪಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ವಿವರವಾದ ಇಲಾಖಾ ವಿಚಾರಣೆಯನ್ನು ಕ.ನಾ.ಸೇ (ವ.ನಿ.ಮೇ) ನಿಯಮಗಳು 1957 ರ ನಿಯಮ 11 ರಡಿ ನಡೆಸಲು ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಎ.ಎಂ.ಪತ್ತಾರ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ಇವರನ್ನು ಮಂಡನಾಧಿಕಾರಿಯನ್ನಾಗಿ ಮೇಲೆ ಓದಲಾದ ಕ್ರಮಾಂಕ (1) ದಿನಾಂಕ:7.6.2016 ರ ಆದೇಶದಲ್ಲಿ ನೇಮಕ ಮಾಡಲಾಗಿತ್ತು.

1. ಶ್ರೀ ಅಮೃತ ಕುಮಾರ್ ಸಾಲಂಕಿ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
2. ಶ್ರೀ ಜೋಸೆಫ್ ಕಡೆಮನಿ, ದ್ವಿತೀಯ ದರ್ಜೆ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
3. ಶ್ರೀ ಮೊದಿನ್ ಸಾಬ್, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಲಿಂಗಸಗೂರು.
4. ಶ್ರೀ ಶಿವಕುಮಾರ್, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಲಿಂಗಸಗೂರು.
5. ಶ್ರೀಸೈಯ್ಯದ್ ಅಭೀದ್ ಅಲಿ, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಲಿಂಗಸಗೂರು.
6. ಶ್ರೀನಿವಾಸ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಲಿಂಗಸಗೂರು.
7. ಪಟ್ಟಣಶೆಟ್ಟಿ, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಲಿಂಗಸಗೂರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ರವರು ಮೇಲೆ ಓದಲಾದ (2) ರ ದಿನಾಂಕ:25.10.2016 ರ ಪತ್ರದಲ್ಲಿ ಸರ್ಕಾರಕ್ಕೆ ಮಾಹಿತಿ ಸಲ್ಲಿಸಿ, ರಾಯಚೂರು ಜಿಲ್ಲಾ ಪಂಚಾಯತ್ ಕಾರ್ಯಾಲಯದ ಸಹಾಯಕ ಕಾರ್ಯದರ್ಶಿ ಹುದ್ದೆಯು ವರ್ಗಾವಣೆಯಿಂದ ತೆರವಾಗಿ ಖಾಲಿ ಇರುತ್ತದೆಯೆಂದು, ಇದರಿಂದಾಗಿ ಮಂಡನಾಧಿಕಾರಿಯಾಗಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣಾ ಕುಡಿಯುವ ನೀರು

---2

ಮತ್ತು ನೈರ್ಮಲ್ಯ ಉಪವಿಭಾಗ, ರಾಯಚೂರು ಇವರನ್ನು ನೇಮಿಸಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ವಿಚಾರಣಾಧಿಕಾರಿಗಳಾದ ಶ್ರೀ ಎ.ಎಂ.ಪತ್ತಾರ ಇವರು ಸಹ ಸರ್ಕಾರಕ್ಕೆ ಮನವಿ ಸಲ್ಲಿಸಿ, ಮಂಡನಾಧಿಕಾರಿಗಳಿಗೆ ವಿಚಾರಣೆಗೆ ಹಾಜರಾಗಲು ನಿರ್ದೇಶನ ನಿಡುವಂತೆ ಕೋರಿರುತ್ತಾರೆ. ಪ್ರಸ್ತುತ ರಾಯಚೂರು ಜಿಲ್ಲಾ ಪಂಚಾಯತ್‌ನ ಸಹಾಯಕ ಕಾರ್ಯದರ್ಶಿ ಹುದ್ದೆಯು ಖಾಲಿ ಇರುವುದರಿಂದ ಇಲಾಖಾ ವಿಚಾರಣೆಯನ್ನು ತ್ವರಿತವಾಗಿ ಪೂರ್ಣಗೊಳಿಸುವ ಉದ್ದೇಶದಿಂದ ಮೇಲೆ ಒದಲಾದ ಕ್ರಮಾಂಕ (1)ರ ದಿನಾಂಕ:07.6.2016 ರ ಆದೇಶದಲ್ಲಿ ನೇಮಿಸಿದ್ದ ಮಂಡನಾಧಿಕಾರಿಯನ್ನು ಬದಲಾಯಿಸಿ, ಆದೇಶ ಹೊರಡಿಸುವುದು ಅಗತ್ಯವೆಂದು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ, ಈ ಆದೇಶ.

**<u>ಆದೇಶ ಸಂಖ್ಯೆ: ಗ್ರಾಅಪ 05 ಇಎನ್‌ಕ್ಯೂ 2006, ಬೆಂಗಳೂರು, ದಿನಾಂಕ:29.11.2016</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:7.6.2016 ರ ಆದೇಶದಲ್ಲಿ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ಇವರನ್ನು ಮಂಡನಾಧಿಕಾರಿಯೆಂದು ನೇಮಿಸಿದ್ದ ಆದೇಶವನ್ನು ಮಾರ್ಪಡಿಸಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ರಾಯಚೂರು ಇವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 (5)(ಸಿ) ರನ್ವಯ ಮಂಡನಾಧಿಕಾರಿ ಎಂದು ನೇಮಿಸಿ, ಆದೇಶಿಸಿದೆ.

ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರು ವಿಚಾರಣಾಧಿಕಾರಿಗಳಾಗಿ ಮುಂದುವರಿದಿರುತ್ತಾರೆ. ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ನಡೆಸಿ, 3 ತಿಂಗಳೊಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೂಜಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ/ಜಲ ಸಂಪನ್ಮೂಲ ಇಲಾಖೆ
3. ಆಯುಕ್ತರು, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು.
6. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ,
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
9. ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮನೆ.ನಂ.144, 2 ನೇ ಕ್ರಾಸ್, ಲಕ್ಷ್ಮೀನಗರ ಹತ್ತಿರ, ಹುಬ್ಬಳ್ಳಿ-580030 (ಮೊಬೈಲ್ ಸಂಖ್ಯೆ:9986153878).
10. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ರಾಯಚೂರು. (ಮುಖ ಪತ್ರದೊಂದಿಗೆ)
11. ಸಂಬಂಧಿಸಿದ ಅಧಿಕಾರಿ/ನೌಕರರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಮುಖಾಂತರ)
12. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
14. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.